
ಸಹಾಯಕ / ಪ್ರಥಮದರ್ಜೆ ಸಹಾಯಕರ ಪರೀಕ್ಷೆ - 2005

ASSISTANT / FIRST DIVISION ASSISTANT EXAMINATION - 2005

ಕರ್ನಾಟಕ ಲೋಕ ಸೇವಾ ಆಯೋಗ

KARNATAKA PUBLIC SERVICE COMMISSION



ಮಾಹಿತಿ ಪುಸ್ತಕ

Information Booklet

ಕರ್ನಾಟಕ ಲೋಕ ಸೇವಾ ಆಯೋಗ

'ಪಾರ್ಕ್‌ಹೌಸ್', ಬೆಂಗಳೂರು - 560 001.

ಸಹಾಯಕರು / ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿ - 2005

ಅನುಸೂಚಿ

ಅನುಬಂಧದ ಸಂಖ್ಯೆ	ಮಾಹಿತಿ ಪುಸ್ತಕದಲ್ಲಿನ ಅಡಕಗಳ ವಿವರ	ಪುಟಗಳ ಸಂಖ್ಯೆ	
		ಇಂದ	ವರೆಗೆ
	ಅಧಿಸೂಚನೆ	1	9
1.	ಪರೀಕ್ಷಾ ಕೇಂದ್ರಗಳ ಹೆಸರು ಹಾಗೂ ಅವುಗಳ ಕೋಡ್ ಸಂಖ್ಯೆಗಳು	10	-
2.	ಪ್ರಥಮ ದರ್ಜೆ ಸಹಾಯಕರ ನೇಮಕಾತಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ನಿಗದಿಪಡಿಸಿದ ಪಠ್ಯಕ್ರಮ	11	-
3.	ಪ್ರಥಮ ದರ್ಜೆ ಸಹಾಯಕರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳಿಂದ ಸ್ವೀಕರಿಸಿರುವ ಇಲಾಖಾವಾರು ಒಟ್ಟು ಹುದ್ದೆಗಳ ಸಂಖ್ಯೆ	12	-
4.	ಮೀಸಲಾತಿಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ನಮೂನೆಗಳು-'ಡಿ', 'ಇ' ಮತ್ತು 'ಎಫ್', ಗ್ರಾಮೀಣ ಮೀಸಲಾತಿ, ಕನ್ನಡ ಮಾಧ್ಯಮ ಅಭ್ಯರ್ಥಿಗಳ ಮೀಸಲಾತಿ, ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ ಹಾಗೂ ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಸಲ್ಲಿಸಬೇಕಿರುವ ನಮೂನೆಗಳು	13	20
5.	ಅಭ್ಯರ್ಥಿಗಳಿಗೆ ಪರೀಕ್ಷಾ ಸೂಚನೆಗಳು (ಕನ್ನಡ ಮತ್ತು ಆಂಗ್ಲ ಮಾಧ್ಯಮಗಳಲ್ಲಿ)	21	28
6.	ಓ.ಎಂ.ಆರ್. ಶೀಟ್‌ನ ಮಾದರಿ	29	30
7.	ಕರ್ನಾಟಕದಲ್ಲಿನ ಮುಖ್ಯ ಅಂಚೆ ಕಚೇರಿಗಳ ಪಟ್ಟಿ	31	-

ಅರ್ಜಿಯನ್ನು ತುಂಬುವ ಮುಂಚೆ ಅಭ್ಯರ್ಥಿಗಳು ಗಮನಿಸಬೇಕಾದ ಪ್ರಮುಖ ಅಂಶಗಳು

ಅರ್ಜಿಯ ಕ್ರಮ ಸಂಖ್ಯೆ 3 : ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಪತ್ರಿಕೆಯಲ್ಲಿ ಅಭ್ಯರ್ಥಿಯು ಯಾವುದಾದರೂ ಒಂದನ್ನು ಆಯ್ಕೆ ಮಾಡಿ ಅದನ್ನು ಸ್ಪಷ್ಟವಾಗಿ ನಿಗದಿತ ವೃತ್ತದಲ್ಲಿ ಶೇಡ್ ಮಾಡತಕ್ಕದ್ದು. (ಉದಾಹರಣೆಗಾಗಿ ಅಭ್ಯರ್ಥಿಗಳ ಸೂಚನೆಯಲ್ಲಿನ ಪುಟ 22ನ್ನು ನೋಡತಕ್ಕದ್ದು).

ಅರ್ಜಿಯ ಕ್ರಮ ಸಂಖ್ಯೆ 5 : ಅಭ್ಯರ್ಥಿಯು ಯಾವುದಾದರೂ ಒಂದು ಮೀಸಲಾತಿಯನ್ನು ಮಾತ್ರ ಕೋರಿ ಸಂಬಂಧಿತ ವೃತ್ತವನ್ನು ಶೇಡ್ ಮಾಡತಕ್ಕದ್ದು.

ಶೇಡ್ ಮಾಡುವ ವಿಧಾನ :–

ಅಭ್ಯರ್ಥಿಯು 2ಎ ಮೀಸಲಾತಿಯನ್ನು ಕೋರಿದ್ದಲ್ಲಿ ಶೇಡ್ ಮಾಡುವ ವಿಧಾನ :–

○	○	○	○	●	○	○	○
ಸಾ.ಅ.	ಪ.ಜಾ.	ಪ.ಪಂ.	ಪ್ರವರ್ಗ–1	2ಎ	2ಬಿ	3ಎ	3ಬಿ

ಅರ್ಜಿಯ ಕ್ರಮ ಸಂಖ್ಯೆ 6 : ಅಭ್ಯರ್ಥಿಯು ಕೋರುವ ಸಮಾನಾಂತರ ಮೀಸಲಾತಿ/ಗಳನ್ನು (Horizontal Reservation) ಕೋರಿದ್ದಲ್ಲಿ ಇದಕ್ಕೆ ಸಂಬಂಧಿಸಿದಂತೆ ಒಂದು ಅಥವಾ ಒಂದಕ್ಕಿಂತ ಹೆಚ್ಚು ಮೀಸಲಾತಿಗಳಿಗೆ ಅರ್ಹತೆ ಪಡೆದರೆ ಸಂಬಂಧಿತ ವೃತ್ತಗಳಲ್ಲಿ ಶೇಡ್ ಮಾಡತಕ್ಕದ್ದು.

ಅಭ್ಯರ್ಥಿಯು ಗ್ರಾಮೀಣ, ಕನ್ನಡ ಮಾಧ್ಯಮ, ಅಂಗವಿಕಲ ಮೀಸಲಾತಿಗಳನ್ನು ಕೋರಿದ್ದಲ್ಲಿ ಶೇಡ್ ಮಾಡುವ ವಿಧಾನ:–

●	●	○	●	○
ಗ್ರಾಮೀಣ	ಕ.ಮಾ.	ಮಾ.ಸೈ	ಅಂ.ವಿ	ಯೋ.ಅ

ಅರ್ಜಿಯ ಕ್ರಮ ಸಂಖ್ಯೆ 12 : ಅಭ್ಯರ್ಥಿಯು ಕೋರುವ ಪರೀಕ್ಷಾ ಕೇಂದ್ರದ ಕೋಡ್ ಸಂಖ್ಯೆಯನ್ನು ನಿಗದಿತ ಅಂಕಣದಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

ಅಭ್ಯರ್ಥಿಯು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 23–07–2005ರೊಳಗೆ ಪದವೀಧರರಾಗಿರತಕ್ಕದ್ದು.

ಅರ್ಜಿ ಮಾರಾಟದ ಅವಧಿ	: **13–06–2005ರಿಂದ 16–07–2005ರವರೆಗೆ.**
ಭರ್ತಿ ಮಾಡಿದ ಅರ್ಜಿ ಸಲ್ಲಿಸುವ ಅವಧಿ	: **13–06–2005ರಿಂದ 23–07–2005ರೊಳಗೆ.**

ಕರ್ನಾಟಕ ಲೋಕ ಸೇವಾ ಆಯೋಗ

'ಪಾರ್ಕ್‌ಹೌಸ್', ಬೆಂಗಳೂರು - 560 001.

ಸಂಖ್ಯೆ : ಇ(2)25/2005-06/ಪಿಎಸ್‌ಸಿ

ದಿನಾಂಕ : 02-06-2005

ಅಧಿಸೂಚನೆ

1. ಕರ್ನಾಟಕ ಸರ್ಕಾರದ ವಿವಿಧ ಇಲಾಖಾ ನೇಮಕಾತಿ ಪ್ರಾಧಿಕಾರಗಳಲ್ಲಿ ಖಾಲಿ ಇರುವ ಸಹಾಯಕ/ಪ್ರಥಮ ದರ್ಜೆ ಸಹಾಯಕರ ರಿಕ್ತಸ್ಥಾನಗಳಿಗೆ ಕರ್ನಾಟಕ ನಾಗರೀಕ ಸೇವೆಗಳ (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978ರ ಅನ್ವಯ ಆಯೋಗದಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸುವ ಅಂಕಗಳನ್ನಾಧರಿಸಿ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆಯೋಗವು ನಿಗದಿಪಡಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಿದೆ. ಸ್ಪರ್ಧಾತ್ಮಕ ಪರೀಕ್ಷೆಯನ್ನು 2005ರ ಸೆಪ್ಟೆಂಬರ್/ಅಕ್ಟೋಬರ್ ಮಾಹೆಯಲ್ಲಿ ನಡೆಸಲಾಗುವುದು. ಪರೀಕ್ಷೆಯ ವೇಳಾಪಟ್ಟಿ ಮತ್ತು ಪರೀಕ್ಷಾ ಕೇಂದ್ರದ ಹೆಸರನ್ನು ಪ್ರವೇಶ ಪತ್ರದಲ್ಲಿ ನಮೂದಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಯೋಗದ ವೆಬ್ ಸೈಟ್ **http:\\kpsc.kar.nic.in**ನ್ನು ನೋಡಬಹುದು.
2. ವಿವಿಧ ನೇಮಕಾತಿ ಪ್ರಾಧಿಕಾರಗಳಲ್ಲಿ ಖಾಲಿ ಇರುವ ಹುದ್ದೆಗಳ ವಿವರಗಳನ್ನು ಅನುಬಂಧ-3ರಲ್ಲಿ ತೋರಿಸಲಾಗಿದೆ. ಅದರಲ್ಲಿ ತೋರಿಸಲಾಗಿರುವ ಹುದ್ದೆಗಳ ಸಂಖ್ಯೆ ಬದಲಾವಣೆಗೆ ಒಳಪಟ್ಟಿರುತ್ತದೆ. ಇಲಾಖಾವಾರು ಹುದ್ದೆಗಳ ವರ್ಗೀಕರಣವನ್ನು ಆಯ್ಕೆ ಪಂತಕ್ಕೆ ಬರುವ ಅಭ್ಯರ್ಥಿಗಳಿಗೆ ತಿಳಿಸಲಾಗುವುದು.
3. ಪರೀಕ್ಷೆಯನ್ನು ಎಲ್ಲಾ ಜಿಲ್ಲಾ ಮತ್ತು ಕೆಲವು ಆಯ್ದ ತಾಲ್ಲೂಕು ಕೇಂದ್ರಗಳಲ್ಲಿ ಮಾತ್ರ ನಡೆಸಲು ಉದ್ದೇಶಿಸಲಾಗಿದ್ದು, ಅಭ್ಯರ್ಥಿಗಳು ಇವುಗಳಲ್ಲಿ ಯಾವುದಾದರು ಒಂದನ್ನು ಮಾತ್ರ ಪರೀಕ್ಷಾ ಕೇಂದ್ರವನ್ನಾಗಿ ಆಯ್ದುಕೊಳ್ಳತಕ್ಕದ್ದು. ಪರೀಕ್ಷಾ ಕೇಂದ್ರಗಳ ಹೆಸರು ಮತ್ತು ಅವುಗಳ ಕೋಡ್ ಸಂಖ್ಯೆಗಳನ್ನು <u>ಅನುಬಂಧ-1</u>ರಲ್ಲಿ ನೀಡಲಾಗಿದೆ. ಆಯ್ದುಕೊಳ್ಳುವ ಕೇಂದ್ರದ ಹೆಸರು ಮತ್ತು ಕೋಡ್ ಸಂಖ್ಯೆಗಳನ್ನು ಅರ್ಜಿಯ ನಿಗದಿತ ಅಂಕಣದಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು. ಪರೀಕ್ಷಾ ಕೇಂದ್ರಗಳ ಹಂಚಿಕೆ ಹಾಗೂ ಪರೀಕ್ಷಾ ದಿನಾಂಕವು ಆಯೋಗದ ಅಂತಿಮ ತೀರ್ಮಾನದಂತೆ ಬದಲಾವಣೆಗೆ ಒಳಪಟ್ಟಿರುತ್ತದೆ. ಆಯೋಗವು ಅಭ್ಯರ್ಥಿಗೆ ಬೇರೆ ಕೇಂದ್ರವನ್ನು ಸೂಚಿಸಬಹುದು ಅಥವಾ ಪರಿಸ್ಥಿತಿಗನುಗುಣವಾಗಿ ಹೊಸ ಕೇಂದ್ರವನ್ನು ಹಂಚಿಕೆ ಮಾಡಬಹುದು. ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿಲ್ಲ.
4. ಸದರಿ ಹುದ್ದೆಗಳ ನೇಮಕಾತಿಗಾಗಿ ಆಯೋಗವು ನಿಗದಿಪಡಿಸಿರುವ ಅರ್ಜಿಯ ನಮೂನೆಯಲ್ಲಿಯೇ ನಿಗದಿತ ಶುಲ್ಕದೊಂದಿಗೆ ಸಲ್ಲಿಸಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **23.07.2005**ಆಗಿರುತ್ತದೆ.
5. ಅರ್ಜಿಯನ್ನು **ರೂ. 50/-** ನ್ನು ಪಾವತಿಸಿ ಅನುಬಂಧ-8ರಲ್ಲಿನ ಪಟ್ಟಿಯಲ್ಲಿ ನಮೂದಿಸಿರುವ ಯಾವುದೇ ಅಂಚೆ ಕಚೇರಿಗಳಲ್ಲಿ ದಿನಾಂಕ **13.06.2005** ರಿಂದ **16.07.2005** ರ ಅವಧಿಯಲ್ಲಿ ಪಡೆಯಬಹುದು. ಈ ಬಗ್ಗೆ ವಿವರಣಾ ಪಟ್ಟಿಯನ್ನು ಅನುಬಂಧ - 8 ರಲ್ಲಿ ನೋಡತಕ್ಕದ್ದು.

ಸೂಚನೆ : ಅರ್ಜಿಗಳನ್ನು ಆಯೋಗದ ಕೇಂದ್ರ ಕಛೇರಿ ಮತ್ತು ಪ್ರಾಂತೀಯ ಕಛೇರಿಗಳಲ್ಲಿಯೂ(ಮೈಸೂರು, ಬೆಳಗಾಂ, ಗುಲ್ಬರ್ಗಾ) ದಿನಾಂಕ : 13.06.2005 ರಿಂದ 16.07.2005ರವರೆಗೆ ಮಾರಾಟ ಮಾಡಲಾಗುವುದು. ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿಪಡಿಸಿದ ಪರೀಕ್ಷಾ ಶುಲ್ಕದೊಂದಿಗೆ ಮೇಲೆ ಹೇಳಿದ ಯಾವುದಾದರೊಂದು ಅಂಚೆ ಕಛೇರಿ ಅಥವಾ ಆಯೋಗದ ಕೇಂದ್ರ / ಪ್ರಾಂತೀಯ ಕಛೇರಿಗಳಲ್ಲಿ ಸಲ್ಲಿಸತಕ್ಕದ್ದು.

ಪ್ರಾಂತೀಯ ಕಛೇರಿಗಳ ವಿಳಾಸ :

1. **ಸಹಾಯಕ ಕಾರ್ಯದರ್ಶಿ**
ಕರ್ನಾಟಕ ಲೋಕ ಸೇವಾ ಆಯೋಗ
ಪ್ರಾಂತೀಯ ಕಛೇರಿ
ಸಂಖ್ಯೆ : 899, 3ನೇ ಮೇನ್, 8 ನೇ ಅಡ್ಡರಸ್ತೆ
ಸರಸ್ವತಿ ಪುರಂ, ಮೈಸೂರು - 570 009

2. **ಸಹಾಯಕ ಕಾರ್ಯದರ್ಶಿ**
ಕರ್ನಾಟಕ ಲೋಕ ಸೇವಾ ಆಯೋಗ
ಪ್ರಾಂತೀಯ ಕಛೇರಿ
ಸಿಟಿಎಸ್ ನಂ. 6543, ಸೆಕ್ಟರ್ 10
ಮಾಳ ಮಾರುತಿ ಬಡಾವಣೆ, ಆಂಜನೇಯನಗರ
ಬೆಳಗಾವಿ - 590 016

3. **ಸಹಾಯಕ ಕಾರ್ಯದರ್ಶಿ**
ಕರ್ನಾಟಕ ಲೋಕ ಸೇವಾ ಆಯೋಗ
ಪ್ರಾಂತೀಯ ಕಛೇರಿ
ಸಂಖ್ಯೆ : 18/ ಬಿ, 2 ನೇ ಮಹಡಿ
ವಿಕಾಸ ಭವನ, ಮಿನಿ ವಿಧಾನಸೌಧ
ಗುಲ್ಬರ್ಗಾ - 585 102

6. **ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.

7. **ಪರೀಕ್ಷಾ ವಿಧಾನ :**

ಕರ್ನಾಟಕ ನಾಗರೀಕ ಸೇವೆಗಳು (ಲಿಪಿಕ ಹುದ್ದೆಗಳ ನೇಮಕಾತಿ) ನಿಯಮಗಳು 1978ರ ಅನ್ವಯ ನಡೆಸುವ ಈ ಪರೀಕ್ಷೆಯು ವಸ್ತುನಿಷ್ಠ ಬಹುಆಯ್ಕೆ ಮಾದರಿಯ ಎರಡು ಲಿಖಿತ ಪತ್ರಿಕೆಗಳನ್ನು ಹೊಂದಿರುತ್ತದೆ.

ಪ್ರಶ್ನೆ ಪತ್ರಿಕೆ - 1 : ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ - **150 ಅಂಕಗಳು - 2 ಘಂಟೆಗಳ ಅವಧಿ**

ಪ್ರಶ್ನೆ ಪತ್ರಿಕೆ - 2 : ಸಾಮಾನ್ಯ ಜ್ಞಾನ - **150 ಅಂಕಗಳು - 2 ಘಂಟೆಗಳ ಅವಧಿ.**

ಸದರಿ ಹುದ್ದೆಗಳ ನೇಮಕಾತಿಗಾಗಿ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮವನ್ನು <u>ಅನುಬಂಧ-2</u>ರಲ್ಲಿ ತೋರಿಸಲಾಗಿದೆ.

8. **ವೇತನ ಶ್ರೇಣಿ :**

1) ಸಹಾಯಕರು - ರೂ. 4150-100-4450-125-5700-150-7200-200-7800
2) ಪ್ರ.ದ.ಸ. - ರೂ. 3850-100-4450-125-5700-150-7050

9. **ಆಯ್ಕೆ ವಿಧಾನ :**

ಆಯೋಗವು ನಿಯಮಾನುಸಾರ ನಡೆಸುವ ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಗಳನುಸಾರ ಇರುವ ಮೀಸಲಾತಿಯನ್ವಯ ಅಂತಿಮವಾಗಿ ಲಭ್ಯವಾಗುವ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.

10. **ಶೈಕ್ಷಣಿಕ ವಿದ್ಯಾರ್ಹತೆ :**

ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಯಾವುದೇ ವಿಶ್ವ ವಿದ್ಯಾಲಯದ ಪದವಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಅಥವಾ ಸರ್ಕಾರವು ಅಂತಹ ಪರೀಕ್ಷೆಗೆ ಸಮಾನವೆಂದು ಅಂಗೀಕರಿಸಿದ ವಿದ್ಯಾರ್ಹತೆಯನ್ನು ಹೊಂದಿರಬೇಕು.

ಟಿಪ್ಪಣಿ:

(1) ಡಿಪ್ಲೊಮಾ, ಹಿಂದಿ ಸಭಾಗಳಿಂದ ಪಡೆದ ರತ್ನಾ, ವಿಶಾರದ, ಪಂಡಿತ್ ...... ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ ಆದ್ದರಿಂದ ಸಹಾಯಕರು / ಪ್ರಥಮ ದರ್ಜೆ ಸಹಾಯಕರು ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ

(2) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ

11. **ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ) ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ) ಗರಿಷ್ಠ ವಯೋಮಿತಿ :-

ಸಾಮಾನ್ಯ ವರ್ಗ	33 ವರ್ಷ
2ಎ, 2ಬಿ, 3ಎ, 3ಬಿ	36 ವರ್ಷ
ಪ.ಜಾ/ಪ.ಪಂ./ಪ್ರ-1	38 ವರ್ಷ

ಈ ಮುಂದಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

(I) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು / ಅವಳು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(II) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(III) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಸಶಸ್ತ್ರಕೇಂದ್ರಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ವಿವರಣೆ : (I) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಅಯೋಧನಾಗಿ) ಸೇವೆ ಸಲ್ಲಿಸಿದ ವ್ಯಕ್ತಿ ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ: ಮತ್ತು (II) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ

ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

(ಅ) ಅಂತಹ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ

ಅಥವಾ

(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯಹಿಡಿತಕ್ಕೆ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವರು.

ಅಥವಾ

(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ

ಅಥವಾ

(ಈ) ತನ್ನ ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

ವಿವರಣೆ : ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ

(IV) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂಥ ಕ್ಯಾಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(V) ಕಂಡಿಕೆ 11.3ಕ್ಕೆ ಸಂಬಂಧಿಸಿದ ವಿವರಣೆಗಳಿಗೆ ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ 2 ಮತ್ತು 6ರನ್ವಯ ಅರ್ಥೈಸಿಕೊಳ್ಳುವುದು.

(VI) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆಯಿದ್ದ ಪಕ್ಷದಲ್ಲಿ ಅಂಥ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(VII) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು.

(VIII) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು.

(IX) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು.

ಉಪ ಕಂಡಿಕೆ 11 (IX)ರ ಮೇರೆಗೆ ವಯೋಮಿತಿ ಸಡಲಿಕೆಯನ್ನು ಕೋರುವ ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದು, ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

ಎಸ್.ಎಸ್.ಎಲ್.ಸಿ ಅಥವ ತತ್ಸಮಾನ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ./ಕ್ಯುಮುಲೇಟಿವ್ ರೆಕಾರ್ಡ್)ದಲ್ಲಿನಮೂದಿಸಿರುವಂತೆ ಜನ್ಮ ದಿನಾಂಕವನ್ನು ಆಯೋಗವು ಒಪ್ಪಿಕೊಳ್ಳುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ

12 ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರಬಯಸುವ

- ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ ''ಡಿ'' ನಲ್ಲಿ
- ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ ''ಇ''ನಲ್ಲಿ ಹಾಗೂ
- 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ ''ಎಫ್''ನಲ್ಲಿಸಂಬಂಧಿತ ತಹಶೀಲದಾರ್ ರವರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಹಾಗೂ ಆಯೋಗವು ಪರಿಶೀಲನೆಗಾಗಿ ಕೇಳಿದಾಗ ಮೂಲ ಪ್ರಮಾಣ ಪತ್ರವನ್ನು ತಪ್ಪದೇ ಸಲ್ಲಿಸತಕ್ಕದ್ದು.

13. ಗ್ರಾಮೀಣ ಅಭ್ಯರ್ಥಿ :

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು.
- ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ 2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ತಹಶೀಲ್ದಾರ್ ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಈ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.
- ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ, ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

ಸೂಚನೆ: ಗ್ರಾಮೀಣ ಮೀಸಲಾತಿ ಸಂಬಂಧಿಸಿದಂತೆ ನಮೂನೆ - 2ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು. ಆಯ್ಕೆ ಹಂತಕ್ಕೆ ಬಂದ ಅಭ್ಯರ್ಥಿಗಳು ಮೂಲ ದಾಖಲೆಗಳ ಪರಿಶೀಲನೆಗಾಗಿ ಆಯೋಗವು ಸೂಚನೆ ನೀಡಿದಾಗ ಸಲ್ಲಿಸತಕ್ಕದ್ದು.

14. ಕನ್ನಡ ಮಾಧ್ಯಮ ಅಭ್ಯರ್ಥಿ :

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪಡೆದ ಪ್ರಮಾಣ ಪತ್ರವನ್ನು ತೆಗೆದಿಟ್ಟುಕೊಂಡಿರತಕ್ಕದ್ದು.

15. ಅಂಗವಿಕಲ ಅಭ್ಯರ್ಥಿ :

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರ ನಮೂನೆ (ಎ) ಮತ್ತು (ಬಿ) ನಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಥವಾ ತಾಲ್ಲೂಕು ಮಟ್ಟದ ಸರ್ಕಾರಿ ವೈದ್ಯರಿಂದ ತೆಗೆದಿಟ್ಟುಕೊಂಡಿರತಕ್ಕದ್ದು. ಸದರಿ ಪ್ರಮಾಣ ಪತ್ರಗಳನ್ನು ಆಯೋಗವು ಅಪೇಕ್ಷಿಸಿದಾಗ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

16. ಯೋಜನಾ ನಿರಾಶ್ರಿತ ಅಭ್ಯರ್ಥಿ :

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ **ಮೊದಲು ಪಡೆದಿಟ್ಟುಕೊಂಡಿರತಕ್ಕದ್ದು.**

ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಅನುಬಂಧ - 4ರಲ್ಲಿ ನೋಡತಕ್ಕದ್ದು.

17. ಪರೀಕ್ಷಾ ಶುಲ್ಕ :

ಅ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ **ರೂ. 100/-**

ಆ) ಇತರೆ ಅಭ್ಯರ್ಥಿಗಳಿಗೆ **ರೂ. 300/-** ನ್ನು ನಿಗದಿಪಡಿಸಲಾಗಿದೆ.

ಇ) ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಇದೇ ಅಧಿಸೂಚನೆಯ ಕಂಡಿಕೆ 5ರಲ್ಲಿ ಸೂಚಿಸಿರುವ ಆಯೋಗದ ಕೇಂದ್ರ ಕಚೇರಿ ಅಥವಾ ಪ್ರಾಂತೀಯ ಕಚೇರಿಗಳಲ್ಲಿ ಪರೀಕ್ಷಾ ಶುಲ್ಕವನ್ನು ಕ್ರಾಸ್ ಮಾಡಿದ ಭಾರತೀಯ ಅಂಚೆ ಆದೇಶ / ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟ್ ಮುಖಾಂತರ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು - 1 ಇವರ ಖಾತೆಗೆ ಜಮೆ ಆಗುವಂತೆ ಪಡೆದು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸತಕ್ಕದ್ದು ಅಥವಾ ಯಾವುದಾದರೊಂದು ಅಂಚೆ ಕಛೇರಿಯಲ್ಲಿ ಮೇಲೆ ತಿಳಿಸಿರುವ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಲ್ಲಿಸತಕ್ಕದ್ದು.

ಈ) ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

18. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಅರ್ಜಿಯ ನಿಗದಿತ ಅಂಕಣದಲ್ಲಿ ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಫೋಟೋವನ್ನು ಅಂಟಿಸತಕ್ಕದ್ದು.
ಅಭ್ಯರ್ಥಿಗಳು ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಕೂಡದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ತೆಗೆದಿಟ್ಟುಕೊಂಡಿದ್ದು, ಆಯೋಗವು ಸೂಚಿಸಿದಾಗ ಸಂಬಂಧಿತ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.

1. ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ (ಪದವಿ)ಯ ಪ್ರಮಾಣ ಪತ್ರಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ.)/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Cumulative Record)
3. ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
   ಟಿಪ್ಪಣಿ : ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೆ ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋ[illegible] ಮಾಡಿಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.
4. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.
5. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
6. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
7. ಅಂಗವಿಕಲ ಅಭ್ಯರ್ಥಿಗಳು ಅಭ್ಯರ್ಥಿಗಳಿಗೆ ನೀಡಿರುವ ಸೂಚನೆಯಂತೆ ನಮೂನೆ 'ಎ' ಮತ್ತು 'ಬಿ' ನಲ್ಲಿ ಸಲ್ಲಿಸಬೇಕು.
8. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು
9. ಅಭ್ಯರ್ಥಿಗಳ ಜೇಷ್ಠತಾ ಅರ್ಹತೆ, ಮೀಸಲಾತಿ, ಇತ್ಯಾದಿಗಳನ್ನು ಆಯೋಗವು ಕೂಲಂಕುಷವಾಗಿ ಪರಿಶೀಲಿಸಿದ ನಂತರ (ಮೆರಿಟ್ ಮತ್ತು ಮೀಸಲಾತಿ ಆಧಾರಿತ ಆಯ್ಕೆ ಪ್ರಕ್ರಿಯೆಗೆ) ಆಯ್ಕೆಗೆ ಪರಿಗಣಿಸಲಾಗುವುದು. ಆಯ್ಕೆ ಹಂತಕ್ಕೆ ಬರುವ ಅಭ್ಯರ್ಥಿಗಳಿಗೆ ಇಲಾಖೆಯನ್ನು ಆಯ್ದುಕೊಳ್ಳುವ ಅವಕಾಶವನ್ನು ಕೌನ್ಸಿಲಿಂಗ್ ನಡೆಸುವ ಮೂಲಕ ನೀಡಲಾಗುವುದು. ಈ ಆಯ್ಕೆಯನ್ನು ಸಹ ಕೆಲವು ಪರಿಶೀಲನೆಗಳಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಎಂದು ತೀರ್ಮಾನಿಸಲು ಸಾಧ್ಯವಿಲ್ಲ, ಆದ್ದರಿಂದ ಈ ಬಗ್ಗೆ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಈ ಕುರಿತಂತೆ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿಲ್ಲ.
10. ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಆಯೋಗವು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರಗಳನ್ನು ಜಾರಿ ಮಾಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೂ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ಪೂರ್ಣಮಾಹಿತಿ ನೀಡದ ಅಥವಾ ತಪ್ಪು ಮಾಹಿತಿ ನೀಡಿದ, ಶುಲ್ಕಪಾವತಿಸದ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
11. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿಗಳಿಗೆ ಸಂಬಂದಿತ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

19. ಆಯೋಗದೊಡನೆ ಪತ್ರ ವ್ಯವಹಾರ :

ಆಯೋಗವು ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ.ಆದಾಗ್ಯೂ ಪರೀಕ್ಷೆಗಾಗಿ ಪ್ರವೇಶ ಪತ್ರ ಬಾರದಿದ್ದಲ್ಲಿ, ಅಭ್ಯರ್ಥಿಯು ಆಯೋಗದ ಕಛೇರಿಯನ್ನು ಖುದ್ದಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸತಕ್ಕದ್ದು (ದೂರವಾಣಿ ಸಂಖ್ಯೆ: 22267032, 22267035) ಮಾಹಿತಿಗಾಗಿ ಸಂಪರ್ಕಿಸುವ ಸಮಯದಲ್ಲಿ ಈ ಹುದ್ದೆಗಳಿಗೆ ಸಲ್ಲಿಸಿದ ಅರ್ಜಿಯ ಕ್ರಮ ಸಂಖ್ಯೆ, ಜನ್ಮ ದಿನಾಂಕ, ಕೋರಿದ ಪರೀಕ್ಷಾ ಕೇಂದ್ರ ಇತ್ಯಾದಿ ವಿವರಗಳನ್ನು ನೀಡತಕ್ಕದ್ದು. ಪರೀಕ್ಷಾ ಪ್ರವೇಶಕ್ಕೆ ಅನುಮತಿಸಲಾದ ಅಭ್ಯರ್ಥಿಯಾಗಿದ್ದರೆ ನಕಲು ಪ್ರವೇಶ ಪತ್ರ ಪಡೆಯಲು ನಿಗದಿಪಡಿಸಲಾಗಿರುವ 50.00 ರೂ.ಗಳ ಶುಲ್ಕವನ್ನು ಅಂಚೆ ಆದೇಶದ ಮೂಲಕ ಪಾವತಿಸಿದರೆ ಪ್ರವೇಶ ಪತ್ರದ ನಕಲನ್ನು ನೀಡಲಾಗುವುದು. ಪ್ರವೇಶ ಪತ್ರ ಹೊಂದಿಲ್ಲದ ಅಭ್ಯರ್ಥಿಗೆ ಪರೀಕ್ಷೆಯನ್ನು ಬರೆಯಲು ಅನುಮತಿಸುವುದಿಲ್ಲ.

20. ಅಭ್ಯರ್ಥಿಗಳು ಮೀಸಲಾತಿಗಳನ್ನು ಕೋರಿದಲ್ಲಿ ಅರ್ಜಿಯಲ್ಲಿ ಮೀಸಲಾತಿಗಾಗಿ ನಿರ್ದಿಷ್ಟಪಡಿಸಿದ ಸರ್ಕಲ್‌ಗಳನ್ನು ಬಾಲ್ ಪಾಯಿಂಟ್ ಪೆನ್ನಿನಿಂದ ತುಂಬತಕ್ಕದ್ದು. ಮೀಸಲಾತಿಯ ಸರ್ಕಲ್‌ಗಳಲ್ಲಿ ಖಾಲಿ ಬಿಟ್ಟಿರುವ ಅಥವಾ ಇತರೆ ಎಂದು ನಮೂದಿಸಿರುವ ಅಭ್ಯರ್ಥಿಗಳ ಮೀಸಲಾತಿಯನ್ನು ಸಾಮಾನ್ಯ ಅರ್ಹತೆಯೆಂದು ಪರಿಗಣಿಸಲಾಗುವುದು. ನಿರ್ದಿಷ್ಟವಾದ ಸರ್ಕಲ್‌ನಲ್ಲಿ ಮೀಸಲಾತಿಯನ್ನು ನಮೂದಿಸದೆ ಬೇರೆ ಕಡೆ ಗುರುತು (ಟೇಪ್) ಮಾಡಿದ್ದಲ್ಲಿ ಅಂತಹವುಗಳನ್ನು ಸಹ ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಪರೀಕ್ಷೆಯ ಪ್ರವೇಶಕ್ಕಾಗಿ ನೀಡುವ ಪ್ರವೇಶ ಪತ್ರದಲ್ಲಿ ಕೆಲವು ಅಭ್ಯರ್ಥಿಗಳ ಹೆಸರನ್ನು ತಾಂತ್ರಿಕ ಕಾರಣದಿಂದಾಗಿ ಮೊಟಕುಗೊಳಿಸಲಾಗುವುದು ಎಂಬುದನ್ನು ಅಭ್ಯರ್ಥಿಗಳು ಗಮನಿಸತಕ್ಕದ್ದು.

ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಬೇಕಾದ ಸಂದರ್ಭದಲ್ಲಿ ಅವರ ಮನವಿ ಈ ಕೆಳಕಂಡ ಮಾಹಿತಿಗಳನ್ನು ಒಳಗೊಂಡಿರಬೇಕು.

1. ಅರ್ಜಿಯ ನಕಲು ಪ್ರತಿ
2. ಅರ್ಜಿ ಸಲ್ಲಿಸಿದ ಬಗ್ಗೆ ಆಯೋಗದ ಕಛೇರಿ ಅಥವಾ ಅಂಚೆ ಕಛೇರಿಯವರು ನೀಡಿದ ಅರ್ಜಿ ಸ್ವೀಕೃತಿ ಪತ್ರ / ಕೌಂಟರ್ ಫಾಯಿಲ್.

21. ವಿಶೇಷ ಸೂಚನೆಗಳು :

1. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.
2. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು (Circle) ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು ('No Objection' Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದಿಟ್ಟುಕೊಂಡಿದ್ದು ಆಯೋಗವು ಸೂಚಿಸಿದಾಗ ಹಾಜರುಪಡಿಸತಕ್ಕದ್ದು.
3. ಅರ್ಜಿಗಳನ್ನು **ದಿನಾಂಕ 13.06.2005 ರಿಂದ 16.07.2005** ರ ಅವಧಿಯಲ್ಲಿ ಖರೀದಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ನಿಗದಿತ ಶುಲ್ಕದೊಂದಿಗೆ ಸಲ್ಲಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ 13.06.2005 ರಿಂದ 23.07.2005** ಆಗಿರುತ್ತದೆ. ಈ ದಿನಾಂಕಗಳು ಪರಿಸ್ಥಿತಿಗನುಗುಣವಾಗಿ ಬದಲಾವಣೆಗೊಳಪಟ್ಟಿರುತ್ತವೆ.
4. ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
5. ಒಬ್ಬನೇ ಅಭ್ಯರ್ಥಿ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ (ಕ್ರಮಬದ್ಧವಾಗಿದ್ದಲ್ಲಿ) ಪರಿಗಣಿಸಲಾಗುವುದು. ಈ ವಿಚಾರದಲ್ಲಿ ಆಯೋಗದ ತೀರ್ಮಾನವೇ ಅಂತಿಮ.
6. ಅಭ್ಯರ್ಥಿಗಳು ಅರ್ಜಿಯೊಂದಿಗೆ ಪಡೆದಿರುವ ಮಾಹಿತಿ ಪುಸ್ತಕವನ್ನು ಸ್ಪರ್ಧಾತ್ಮಕ ಪರೀಕ್ಷೆ ಮುಗಿಯುವ ತನಕ ಸುರಕ್ಷಿತವಾಗಿಟ್ಟುಕೊಳ್ಳತಕ್ಕದ್ದು. ಈ ಪುಸ್ತಕದಲ್ಲಿ ಅರ್ಜಿಯಲ್ಲಿ ಭರ್ತಿ ಮಾಡುವ ವಿಧಾನ, ಮೀಸಲಾತಿ ಪ್ರಮಾಣ ಪತ್ರಗಳ ನಮೂನೆ, ಮೀಸಲಾತಿಯ (Horizontal & Vertical Reservations) ವಿಶ್ಲೇಷಣೆ ಇತ್ಯಾದಿ ವಿಷಯಗಳ ಬಗ್ಗೆ ಕೂಲಂಕುಷವಾಗಿ ವಿವರಿಸಿದ್ದು, ಅವುಗಳನ್ನು ಅಭ್ಯರ್ಥಿಗಳು ಗಮನವಿಟ್ಟು ಓದಿಕೊಳ್ಳತಕ್ಕದ್ದು.
7. ಈ ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದಂತೆ ನಿಗದಿತ ವಿದ್ಯಾರ್ಹತೆ, ತತ್ಸಮಾನ ವಿದ್ಯಾರ್ಹತೆ, ಮೀಸಲಾತಿಯ ಸ್ಪಷ್ಟ ನಮೂದು, ಹುಟ್ಟಿದ ದಿನಾಂಕ ಅಥವಾ ಇತರೆ ಯಾವುದೇ ಮಾಹಿತಿಯನ್ನು ಅಧಿಸೂಚನೆ ಹಾಗೂ ಅಭ್ಯರ್ಥಿಗಳ ಸೂಚನೆಗಳಲ್ಲಿನ ವಿವರಣೆಗಳಂತೆ ಅಭ್ಯರ್ಥಿಗಳು ಆಯಾ ಅರ್ಜಿಗಳಲ್ಲಿ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಅರ್ಜಿಗಳನ್ನು ಕ್ರಮಬದ್ಧವಾಗಿ ಭರ್ತಿ ಮಾಡದೆ ಇದ್ದಲ್ಲಿ, ಅಂತಹ ಅರ್ಜಿಗಳನ್ನು ಆಯೋಗವು ಏಕಪಕ್ಷೀಯವಾಗಿ ತಿರಸ್ಕರಿಸುವುದು.
8. ಅಭ್ಯರ್ಥಿಗಳು ಅರ್ಜಿಗಳನ್ನು ಕ್ರಮಬದ್ಧವಾಗಿ ಭರ್ತಿ ಮಾಡುವ ವಿಧಾನವನ್ನು ತಿಳಿಯಲು ಆಯೋಗದ ವೆಬ್ ಸೈಟ್ ಅನ್ನು ಪರಿಶೀಲಿಸಬಹುದು.
9. ಆಯೋಗವು ಸದರಿ ಪರೀಕ್ಷೆಯನ್ನು Karnataka Civil Services (Recruitment to Ministerial Posts) Rules 1978 and Amendment Notification No. DPAR 90 SCR 85 Dated: 27th February 1992 ರನ್ವಯ ನಡೆಸುತ್ತದೆ.
10. ಇಲಾಖಾ ಆಯ್ಕೆ ಪ್ರಕ್ರಿಯೆಯು ಮುಗಿದ ನಂತರ ಅಭ್ಯರ್ಥಿಯ ಅರ್ಹತೆ, ಜೇಷ್ಠತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರವೇ ಸಂಬಂಧಿತ ಅರ್ಹ ಅಭ್ಯರ್ಥಿಗಳ ಹೆಸರುಗಳನ್ನು ಆಯ್ಕೆ ಪಟ್ಟಿಗೆ ಸೇರಿಸಲಾಗುವುದು. ಈ ಬಗ್ಗೆ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ.

22. ಆಯೋಗವು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಅಭ್ಯರ್ಥಿಗಳು ಸ್ವಂತ ಕೈಬರಹದಿಂದ ದುಂಡಗೆ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ ಅಪೂರ್ಣವಾಗಿರುವ ಮತ್ತು ಸಹಿ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

23. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳತಕ್ಕದ್ದು :-

GM	- General Merit	**3B**	- Category 3B
SC	- Scheduled Caste	**RL**	- Rural Reservation
ST	- Scheduled Tribe	**KMS**	- Kannada Medium Student
C-1	- Category - I	**PH**	- Physically Handicapped
2A	- Category 2A	**P.D.P.**	- Project Displaced Person
2B	- Category 2B	**Ex-MP**	- Ex-Military Person
3A	- Category 3A		

ವಿಶೇಷ ಸೂಚನೆ : - (i) ಸರ್ಕಾರಿ ಆದೇಶ ಸಂಖ್ಯೆ SWD 225 BCA 2000 Dated:30th March,2002 ರನ್ವಯ ಪ್ರಸ್ತುತ ನಿಯಮಾವಳಿಗಳ ರೀತ್ಯ ಮೀಸಲಾತಿಗೆ ಸಂಬಂಧಿಸಿದಂತೆ ಚಾಲ್ತಿಯಲ್ಲಿರುವ ಜಾತಿಗಳ ಬಗ್ಗೆ ಮಾಹಿತಿಗಾಗಿ ಸಂಬಂಧಿತ ಅಭ್ಯರ್ಥಿಗಳು ಆಯೋಗದ ವೆಬ್‌ಸೈಟನ್ನು ನೋಡಬಹುದಾಗಿದೆ.

(ii) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಮೊದಲು ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆ (ಪದವಿ) ಯನ್ನು ಹೊಂದಿರಲೇಬೇಕು.

24. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಹೆಸರು, ತಾಯಿ / ತಂದೆಯ ಹೆಸರು, ವಿಳಾಸ ಇತ್ಯಾದಿಗಳನ್ನು ಸ್ಪಷ್ಟವಾಗಿ ಇಂಗ್ಲೀಷ್‌ನಲ್ಲಿ ಬಿಡಿ ಬಿಡಿಯಾಗಿ ದಪ್ಪ ಅಕ್ಷರಗಳಲ್ಲಿ(Capital letters) ಬರೆಯಬೇಕು.

ಟಿಪ್ಪಣಿ : ಅನುಸೂಚಿಯಲ್ಲಿ ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಪ್ರಸಂಗಗಳಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

25. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

26. **ದುರ್ನಡತೆ :**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂಬ ಬಗ್ಗೆ ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ಆಯೋಗದಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಆಯೋಗವು ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

(ಬಿ.ಎಸ್. ರಾಮಪ್ರಸಾದ್)
ಕಾರ್ಯದರ್ಶಿ,
ಕರ್ನಾಟಕ ಲೋಕ ಸೇವಾ ಆಯೋಗ.

ಅನುಬಂಧ - 1

ಪರೀಕ್ಷಾ ಕೇಂದ್ರಗಳ ಹೆಸರು ಮತ್ತು ಅವುಗಳ ಕೋಡ್ ಸಂಖ್ಯೆಗಳು

ಪರೀಕ್ಷಾ ಕೇಂದ್ರಗಳು	ಕೋಡ್ ಸಂಖ್ಯೆಗಳು
ಬೆಂಗಳೂರು ನಗರ	01
ಬೆಳಗಾವಿ	02
ಚಿಕ್ಕೋಡಿ	03
ಬಳ್ಳಾರಿ	04
ಹೊಸಪೇಟೆ	05
ಬೀದರ್	06
ಬಿಜಾಪುರ	07
ಬಾಗಲಕೋಟೆ	08
ಚಿಕ್ಕಮಗಳೂರು	09
ಚಿತ್ರದುರ್ಗ	10
ಚಾಮರಾಜನಗರ	11
ಧಾರವಾಡ	12
ಹುಬ್ಬಳ್ಳಿ	13
ದಾವಣಗೆರೆ	14
ಗುಲ್ಬರ್ಗ	15
ಯಾದಗಿರಿ	16
ಗದಗ್	17
ಹಾಸನ	18
ಚನ್ನರಾಯಪಟ್ಟಣ	19
ಹಾವೇರಿ	20
ಕಾರವಾರ	21
ಶಿರ್ಸಿ	22
ಕೋಲಾರ	23
ಚಿಕ್ಕಬಳ್ಳಾಪುರ	24
ಕೊಪ್ಪಳ	25
ಮಂಡ್ಯ	26
ಮಂಗಳೂರು	27
ಮಡಿಕೇರಿ	28
ಮೈಸೂರು	29
ನಂಜನಗೂಡು	30
ರಾಯಚೂರು	31
ಸಿಂಧನೂರು	32
ಶಿವಮೊಗ್ಗ	33
ಸಾಗರ	34
ತುಮಕೂರು	35
ತಿಪಟೂರು	36
ಉಡುಪಿ	37

ಅನುಬಂಧ - 2

ಪಠ್ಯಕ್ರಮ

ಸಹಾಯಕ / ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮ : ವಿಷಯ ಸೂಚಿ (Syllabus) :
ಈ ಪರೀಕ್ಷೆಯು ಎರಡು ಲಿಖಿತ ಪತ್ರಿಕೆಗಳನ್ನು ಹೊಂದಿರುತ್ತದೆ.

1) ಸಾಮಾನ್ಯ ಕನ್ನಡ / ಸಾಮಾನ್ಯ ಇಂಗ್ಲೀಷಿನ ಒಂದು ಪತ್ರಿಕೆ ಮತ್ತು

2) ಸಾಮಾನ್ಯ ಜ್ಞಾನದ ಒಂದು ಪತ್ರಿಕೆ

ಪ್ರತಿಯೊಂದು ಪತ್ರಿಕೆಯ ಗರಿಷ್ಠ ಅಂಕಗಳು 150 ಆಗಿರುತ್ತದೆ ಮತ್ತು ಪ್ರತಿಯೊಂದು ಪತ್ರಿಕೆಯನ್ನು 2 ಗಂಟೆ ಸಮಯದಲ್ಲಿ ಉತ್ತರಿಸಬೇಕಾಗುತ್ತದೆ. ಈ ಎರಡು ಪತ್ರಿಕೆಗಳು ''ವಸ್ತುನಿಷ್ಠ ಬಹು ಆಯ್ಕೆಯ'' ವಿಧಾನದ್ದಾಗಿರುವುದು (Objective Multiple Choice Type)

2) (ಎ) ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷಿನ ಪತ್ರಿಕೆಯು ಸಾಮಾನ್ಯವಾಗಿ ವಿಶ್ವವಿದ್ಯಾನಿಲಯದ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು. ಇದರ ಮೂಲಕ ಅಭ್ಯರ್ಥಿಯ ಕನ್ನಡ ಇಂಗ್ಲೀಷ್ ವ್ಯಾಕರಣ ಶಬ್ದ ಸಂಪತ್ತು ಕಾಗುಣಿತ (ಸ್ಪೆಲಿಂಗ್) ಸಮನಾರ್ಥಕ ಪದಗಳು, ವಿರುದ್ಧಾರ್ಥಕ ಪದಗಳು ಇವುಗಳ ಪರಿಜ್ಞಾನ, ಇಂಗ್ಲೀಷ್ / ಕನ್ನಡ ಭಾಷೆಯನ್ನು ಅರಿಯುವ ಮತ್ತು ಗ್ರಹಿಸುವ ಅಭ್ಯರ್ಥಿಯ ಶಕ್ತಿಯು ಮತ್ತು ಅದರ ಸರಿಯಾದ ಹಾಗೂ ತಪ್ಪು ಬಳಕೆ ಇತ್ಯಾದಿಗಳನ್ನು ಪರಿಶೀಲಿಸುವ ಅಭ್ಯರ್ಥಿಯ ಸಾಮರ್ಥ್ಯ ಇವುಗಳನ್ನು ಪರೀಕ್ಷಿಸಲು ಉದ್ದೇಶಿಸಲಾಗಿದೆ.

(ಬಿ) ಅಭ್ಯರ್ಥಿಗಳು ಸಾಮಾನ್ಯ ಕನ್ನಡ ಅಥವಾ ಸಾಮಾನ್ಯ ಇಂಗ್ಲೀಷ್ ಪತ್ರಿಕೆಗಳಲ್ಲಿ ಯಾವುದಾದರೂ ಒಂದಕ್ಕೆ ಉತ್ತರಿಸಬಹುದು.

3) ಸಾಮಾನ್ಯ ಜ್ಞಾನ ಪತ್ರಿಕೆಯು ಸಾಮಾನ್ಯವಾಗಿ ವಿಶ್ವವಿದ್ಯಾನಿಲಯದ ಪದವಿ ಪರೀಕ್ಷೆಯಲ್ಲಿ ಉತ್ತೀರ್ಣನಾಗಿರುವ ವಿದ್ಯಾರ್ಥಿಗೆ ಇರಬೇಕಾದ ಸಾಮಾನ್ಯ ಜ್ಞಾನಕ್ಕೆ ಸಂಬಂಧಪಟ್ಟ ಕನಿಷ್ಠ ವಿದ್ಯಾಮಟ್ಟಕ್ಕೆ ಸಮನಾಗಿರುವುದು ಮತ್ತು ಇದು ಭಾರತದ ಸಂವಿಧಾನ, ಭಾರತದ ಇತಿಹಾಸ ಮತ್ತು ಸಂಸ್ಕೃತಿ ಭಾರತದ ಸಾಮಾನ್ಯ ಹಾಗೂ ಆರ್ಥಿಕ, ಭೂಗೋಳ ಶಾಸ್ತ್ರ ಇತ್ತೀಚಿನ ಘಟನೆಗಳು, ದೈನಿಕ ಜೀವನದಲ್ಲಿ ವಿಜ್ಞಾನ ಮತ್ತು ಒಬ್ಬ ವಿದ್ಯಾವಂತ ವ್ಯಕ್ತಿಯು ದೈನಂದಿನ ಜೀವನದಲ್ಲಿ ಗಮನಿಸಬಹುದಾದಂತಹ ವಿಷಯಗಳು ಇವುಗಳ ಮೇಲಿನ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

SYLLABUS

1. Syllabus for the competitive examination for recruitment to the cadre of Assistants and First Division Assistants: The examination will consist of two written papers, namely,-

   (1) a paper on General English or General Kannada, and

   (2) a paper on General knowledge.

The maximum marks for each paper will be 150.

2. (a) The paper on General English or General Kannada will normally conform to the minimum standard expected of a student who has passed the Bachelor's Degree examination of a University. It is intended to test candidate's knowledge of English/Kannada grammar, vocabulary, spelling, synonyms, antonyms, his power to understand and comprehend English/Kannada Language and his ability to discriminate between correct and incorrect usage, etc.

   b) The candidates may answer either the paper on General English or the paper on General Kannada,

3. (a) The paper on General Knowledge will normally conform to the minimum standard relating to General Knowledge, expected of a student who has passed Bachelor's Degree Examination of all University and will cover questions on the Constitution of India, Indian History ;and Culture, General and Economic Geography of India, current events, every day science and such matters of every day observation as may be expected of an educated person.

   b) The candidates may answer this entire paper either in English or in Kannada but they shall not answer some questions in English and some in Kannada. The questions in both the papers will be of ' Objective Multiple Choice Type.'

ಅನುಬಂಧ - 3

ಸಹಾಯಕರು / ಪ್ರಥಮ ದರ್ಜೆ ಸಹಾಯಕರ ನೇಮಕಾತಿಗೆ ಸಂಬಧಿಸಿದಂತೆ ವಿವಿಧ ಇಲಾಖಾವಾರು ಹುದ್ದೆಗಳ ಪಟ್ಟಿ

ಕ್ರ. ಸಂ.	ಇಲಾಖೆಯ ಹೆಸರು	ಹುದ್ದೆಗಳ ಸಂಖ್ಯೆ
1.	ನ್ಯಾಯಾಂಗ ಇಲಾಖೆಯ ಒಟ್ಟು ಹುದ್ದೆಗಳು	339
2.	ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು	25
3.	ಡೈರೆಕ್ಟರ್ ಜನರಲ್ ಮತ್ತು ಇನ್‌ಸ್ಪೆಕ್ಟರ್ ಜನರಲ್ ಆಫ್ ಪೊಲೀಸ್‌ರವರ ಕಾರ್ಯಾಲಯ	100
4.	ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕ ಕಾರಾಗೃಹಗಳ ಮಹಾ ನಿರೀಕ್ಷಕ ಕಛೇರಿ, ಬೆಂಗಳೂರು	09
5.	ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ಸಮಾದೇಷ್ಟರು, ಗೃಹ ರಕ್ಷಕ ದಳ ಮತ್ತು ಪೌರ ರಕ್ಷಣಾ ನಿರ್ದೇಶಕರ ಕಛೇರಿ, ಬೆಂಗಳೂರು	14
6.	ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆ, ಬೆಂಗಳೂರು	14
7.	ಕನ್ನಡ ಮತ್ತು ಸಾಂಸ್ಕೃತಿಕ ನಿರ್ದೇಶನಾಲಯ , ಬೆಂಗಳೂರು	02
8.	ಅಬಕಾರಿ ಇಲಾಖೆ	14
9.	ಮೀನುಗಾರಿಕೆ ಇಲಾಖೆ	15
	ಒಟ್ಟು	532

ಸೂಚನೆ : ವಿವಿಧ ಇಲಾಖೆಗಳಲ್ಲಿ ಲಭ್ಯವಿರುವ ಒಟ್ಟು ಹುದ್ದೆಗಳ ಸಂಖ್ಯೆಯು ಬದಲಾವಣೆಗೊಳಪಟ್ಟಿರುತ್ತದೆ. ಇಲಾಖಾ ಹಂಚಿಕೆ ಪ್ರಕ್ರಿಯೆಯನ್ನು ನಡೆಸುವ ಸಂದರ್ಭದಲ್ಲಿ ವಿವಿಧ ಇಲಾಖೆಗಳ ಹುದ್ದೆಗಳ ಮೀಸಲಾತಿಯ ಬಗ್ಗೆ(Verticle and Horizontal reservations) ಮಾಹಿತಿಯನ್ನು ಆಯ್ಕೆ ಹಂತಕ್ಕೆ ಬರುವ ಅಭ್ಯರ್ಥಿಗಳಿಗೆ ಒದಗಿಸಲಾಗುವುದು.

<u>ಹುದ್ದೆಗಳ ವರ್ಗೀಕರಣ</u>

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ.	ಕ.ಮಾ.ಅ.	ಯೋ.ಅ.	ಅಂ.ವಿ.	ಒಟ್ಟು
ಪ.ಜಾ.	30	29	21	03	01	–	–	84
ಪ.ಪಂ.	14	03	04	–	–	–	–	21
ಪ್ರ-1	16	07	03	–	–	–	–	26
ಪ್ರ-2(ಎ)	30	24	17	02	01	–	01	75
ಪ್ರ-2(ಬಿ)	21	04	02	–	–	–	–	27
ಪ್ರ-3(ಎ)	09	03	01	–	–	02	–	15
ಪ್ರ-3(ಬಿ)	10	04	03	–	–	–	03	20
ಸಾ.ಅ.	64	89	66	23	09	06	07	264
ಒಟ್ಟು	194	163	117	28	11	08	11	532

ಅನುಬಂಧ -4

(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ / ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

....ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .... ಜಿಲ್ಲೆಯ / ವಿಭಾಗದ ....ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ/ ಶ್ರೀಮತಿ ....ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .... ಇವರು ಅನುಸೂಚಿತ ಜಾತಿ/ ಅನುಸೂಚಿತ ಬುಡಕಟ್ಟು* ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951.

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956.
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ 1962.
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ / ಕುಮಾರಿ*... ಮತ್ತು / ಅಥವಾ ಅವನ* / ಅವಳ* ಕುಟುಂಬವು...ರಾಜ್ಯ / ಕೇಂದ್ರಾಡಳಿತ ಪ್ರದೇಶದ ....ಜಿಲ್ಲಾ/ ವಿಭಾಗದ.............................. ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ...

ತಹಶೀಲ್ದಾರ್...................................

ಸ್ಥಳ :

ದಿನಾಂಕ :

ಪದನಾಮ

ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

*ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟುಬಿಡಿ / ಹೊಡೆದು ಹಾಕಿ

ಸೂಚನೆ : ಇಲ್ಲಿ ಉಪಯೋಗಿಸಿದ '' ಸಾಮಾನ್ಯ ನಿವಾಸಿಗಳು'' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ ; ಬಿಸಿ 12028 / 2 /76-ಎಸ್ ಸಿಟಿ-1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ -1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರ.ವರ್ಗ-1)ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ

....ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ/ ಶ್ರೀಮತಿ ....ಇವರ ಮಗ / ಮಗಳು / ಪತ್ನಿ/ ಪತಿಯಾದ ಶ್ರೀ/ಶ್ರೀಮತಿ.................................... ಇವರು ಹಿಂದುಳಿದ ವರ್ಗಗಳ (ಪ್ರವರ್ಗ)...................................... ಜಾತಿಯ .... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :

ದಿನಾಂಕ :

ತಹಶಿಲ್ದಾರ್

............................ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ

.... ರಲ್ಲಿ ವಾಸವಾಗಿರುವ ಶ್ರೀ/ ಶ್ರೀಮತಿ .... ಇವರ ಮಗ / ಮಗಳು / ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ.............................. ಇವರು ಮತ್ತು ಆತನ /ಅವಳ ತಂದೆ /ತಾಯಿ/ ಪೋಷಕರು/ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ/ ಪತ್ನಿ /ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 6000-12000/- ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ ಆಕೆಯ ತಂದೆ ತಾಯಿ/ಪೋಷಕರು / ಪತ್ನಿ/ಪತಿಯ ಆದಾಯವು ಎರಡು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕ / ಪತ್ನಿ /ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ : ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30.03.2002ರ ಅನ್ವಯ ಶ್ರೀ / ಶ್ರೀಮತಿ/ ಕುಮಾರಿ .... ಇವರು ....ಜಾತಿಗೆ ....ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ : ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ .... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ :

ದಿನಾಂಕ :

ತಹಶಿಲ್ದಾರ್

............................ತಾಲ್ಲೂಕು

ಕಛೇರಿಯ ಮೊಹರು

ನಮೂನೆ-1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಸೀಲ್ದಾರರು

................ತಾಲ್ಲೂಕು

................ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ....................................... ಎಂಬುವವರ ಮಗ/ಮಗಳು/ಪತಿ/ಪತ್ನಿ.........................ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :

   ತಾಲ್ಲೂಕು :

   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ:
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ:
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ:
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:

   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
